**ಹಿರಿಯ ದಿವಾಣಿ ನ್ಯಾಯಾಧೀಶರ ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ತಿ. ನರಸೀಪುರ**

**ಸಿಸಿ ಸಂಖ್ಯೆ: 222/2023**

ಚಾ.ಸಾ–01, ಫ್ರಾ.ಸಾ–01

| | | |
|---|---|---|
| ಹೆಸರು | : | ಮಹದೇವಮ್ಮ |
| ಗಂಡನ ಹೆಸರು | : | ಪ್ರಸನ್ನ ಮೂರ್ತಿ |
| ವಯಸ್ಸು | : | 65 |
| ವೃತ್ತಿ | : | ಗೃಹಿಣಿ |
| ವಾಸ | : | ತಿ. ನರಸೀಪುರ |

**ದಿನಾಂಕ 24.10.2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎಪಿಪಿ ರವರಿಂದಃ**

ಚಾಸಾ–2 ರಿಂದ 7 ರವರ ಪರಿಚಯವಿಲ್ಲ. ಆರೋಪಿತನ ಪರಿಚಯವಿಲ್ಲ. ಆರೋಪಿತರು ನನ್ನ ಮನೆಯಲ್ಲಿ ಏನನ್ನೂ ಕಳವು ಮಾಡಿಲ್ಲ. ನಾನು ದೂರು ನೀಡಿಲ್ಲ. ನನ್ನ ಸಮಕ್ಷಮ ಪಂಚನಾಮ ಜರುಗಿಸಿಲ್ಲ.

ನನಗೆ ಈಗ ತೋರಿಸಿದ ದಾಖಲೆಗಳಲ್ಲಿ ನನ್ನ ಸಹಿಗಳಿವೆ. ಆ ದಾಖಲೆಗಳು ದೂರು ಮತ್ತು ಪಂಚನಾಮಗಳಾಗಿದ್ದು, ಅವುಗಳನ್ನು ಕ್ರಮವಾಗಿ ನಿಪಿ.1 ಮತ್ತು 2 ಎಂದು, ಅವುಗಳಲ್ಲಿರುವ ಸಾಕ್ಷಿಯ ಸಹಿಗಳನ್ನು ನಿಪಿ.1(ಎ) ಮತ್ತು 2(ಎ) ಎಂದು ಗುರುತಿಸಲಾಯಿತು.

**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರು ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಕೋರಿದ್ದು, ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ**

**ಸಾಕ್ಷ್ಯ ನುಡಿದಿರುವುದರಿಂದ, ಮಾನ್ಯ ಎಪಿಪಿ ರವರ ಕೋರಿಕೆಯನ್ನು ಪರಿಗಣಿಸಿ ಸಾಕ್ಷಿಯನ್ನು ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲುಃ ಮಾನ್ಯ ಎಪಿಪಿ ರವರಿಂದಃ**

ದಿನಾಂಕ 25.01.2023 ರಂದು ಬೆಳಿಗ್ಗೆ 9.15 ಗಂಟೆ ಸಮಯದಲ್ಲಿ ತಿ. ನರಸೀಪುರ ಪಟ್ಟಣದ ಕೆ ಹೆಚ್ ಬಿ ಕಾಲೋನಿಯ ನನ್ನ ಅಂಗಡಿಯಲ್ಲಿ ನಾನು ವ್ಯಾಪಾರ ಮಾಡುತ್ತಿದ್ದಾಗ, 1ನೇ ಆರೋಪಿತ ನನ್ನ ಕತ್ತಿನಲ್ಲಿದ್ದ 80 ಗ್ರಾಂ ತೂಕದ ಎರಡು ಎಳೆ ಚಿನ್ನದ ಸರವನ್ನು ಕಿತ್ತುಕೊಂಡಿದ್ದು, ಆ ರೀತಿ ಕಿತ್ತುಕೊಂಡಾಗ 20 ಗ್ರಾಂ ಅವರ ಕೈ ಸೇರಿದ್ದು, ಆತ 2ನೇ ಆರೋಪಿತನ ಮೋಟಾರ್ ಸೈಕಲ್‌ನಲ್ಲಿ ಕುಳಿತುಕೊಂಡು ಸ್ಥಳದಿಂದ ಪರಾರಿಯಾಗಿರುತ್ತಾರೆ ಎಂದರೆ ಸರಿಯಲ್ಲ. ಹಾಗಾಗಿ ನಿಪಿ-1 ರಂತೆ ದೂರನ್ನು ನಾನು ನೀಡಿರುತ್ತೇನೆ ಎಂದರೆ ಸರಿಯಲ್ಲ.

ಅದೇ ದಿನ ಬೆಳಗ್ಗೆ 11.30 ರಿಂದ ಮಧ್ಯಾಹ್ನ 12.30 ಗಂಟೆ ಸಮಯದಲ್ಲಿ ಪೊಲೀಸರು ನಾನು ತೋರಿಸಿದಂತೆ ಘಟನಾ ಸ್ಥಳದಲ್ಲಿ ಚಾಸಾ-2 ಮತ್ತು 3 ರವರ ಸಮಕ್ಷಮ ಪಂಚನಾಮ ಜರುಗಿಸಿರುತ್ತಾರೆ ಎಂದರೆ ಸರಿಯಲ್ಲ. ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದ ಇರುವುದಿಲ್ಲ.**

**ಮರು ವಿಚಾರಣೆ ಇರುವುದಿಲ್ಲ.**

(ತೆ ನ್ಯಾದಲ್ಲಿ ಬೆರಳಚ್ಚುಗೊಳಿಸಲಾಯಿತು)

ಓ ಹೇ ಕೇ ಸರಿ ಇದೆ

**ಹಿರಿಯ ದಿವಾಣಿ ನ್ಯಾಯಾಧೀಶರು ಮತ್ತು**
**ಪ್ರ.ದ.ನ್ಯಾದ. ತಿ.ನರಸೀಪುರ**